1/578466/2024

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರದಗುಂಡಿ ಮತ್ತು ಶೌಚಾಲಯ ಗುಂಡಿಯಲ್ಲಿ ಸ್ವಚ್ಛತಾ ಕಾಮಗಾರಿಗಳ ನಿರ್ವಹಣೆಯ ಸಂದರ್ಭದಲ್ಲಿ ಮೃತಪಟ್ಟ ಪೌರಕಾರ್ಮಿಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 10 ಎಂಡಬ್ಲೂಪಿ 2015, ದಿನಾಂಕ: 19.06.2012.
2. ಸರ್ಕಾರದ ಆದೇಶ ಸಂಖ್ಯೆ: ನಅಇ 74 ಎಂಡಬ್ಲೂಪಿ 2015, ದಿನಾಂಕ: 23.11.2015 ಮತ್ತು ತಿದ್ದುಪಡಿ ಆದೇಶ ದಿನಾಂಕ: 12.02.2016
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ: SWD SDC 148 2023, ದಿನಾಂಕ: 27.12.2023.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ: DMA/ SWM/ MSCV/ 3/ 2023.

*****

**ಪ್ರಸ್ತಾವನೆ:**

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ, ಈ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಇತರೇ ನಿಗಮ ಮಂಡಳಿಗಳ ವ್ಯಾಪ್ತಿಯಲ್ಲಿ ಶೌಚಾಲಯ ಗುಂಡಿಗಳನ್ನು ಯಾಂತ್ರಿಕ ವಿಧಾನದ ಮೂಲಕ ಸ್ವಚ್ಛಗೊಳಿಸದೆ ಮ್ಯಾನ್ಯುಯಲ್ ಸ್ಕಾವೆಂಜಿಂಗ್ ಮೂಲಕ ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಮೃತರಾದ ಪೌರಕಾರ್ಮಿಕರ ಕುಟುಂಬಕ್ಕೆ ನೀಡುವ ಪರಿಹಾರ ಧನವನ್ನು ರೂ.5.00 ಲಕ್ಷಕ್ಕೆ ದಿನಾಂಕ: 19.06.2012 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 23.11.2015ರ ಆದೇಶ ಮತ್ತು ತಿದ್ದುಪಡಿ ಆದೇಶ ದಿನಾಂಕ: 12.02.2016 ರಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 10 ಎಂಡಬ್ಲೂಪಿ 2012 ನ್ನು ಭಾಗಶ: ಮಾರ್ಪಡಿಸಿ, ಕರ್ನಾಟಕ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರದಗುಂಡಿ ಮತ್ತು ಶೌಚಾಲಯ ಗುಂಡಿಗಳನ್ನು ಮ್ಯಾನ್ಯುಯಲ್ ಸ್ಕಾವೆಂಜಿಂಗ್ ಪದ್ಧತಿಯಲ್ಲಿ ಸ್ವಚ್ಛಗೊಳಿಸುವಾಗ ಮ್ಯಾನ್ಯುಯಲ್ ಸ್ಕಾವೆಂಜಿಂಗ್ ನಿಂದ ಮೃತಪಟ್ಟವರ ಅವಲಂಬಿತರ ಕುಟುಂಬಕ್ಕೆ ನೀಡಲಾಗುತಿರುವ ಪರಿಹಾರ ಮೊತ್ತವನ್ನು ರೂ.5.00 ಲಕ್ಷಗಳಿಂದ ರೂ.10.00 ಲಕ್ಷಗಳಿಗೆ ಪರಿಷ್ಕರಿಸಿ ಆದೇಶಿಸಲಾಗಿದೆ. ಪರಿಷ್ಕರಿಸಲಾದ ಹೆಚ್ಚುವರಿ ಪರಿಹಾರ ಮೊತ್ತವನ್ನು ನಗರ ಸ್ಥಳೀಯ ಸಂಸ್ಥೆಗಳ ಮುನ್ಸಿಪಲ್ ಸ್ವಂತ ನಿಧಿಯಿಂದ ಭರಿಸತಕ್ಕದ್ದು ಹಾಗೂ ಉಳಿದಂತೆ ಮಹಾನಗರಪಾಲಿಕೆ/ ನಿಗಮ/ ಮಂಡಳಿಗಳು ಸದರಿ ಹೆಚ್ಚುವರಿ ಮೊತ್ತವನ್ನು ಅವುಗಳ ಸ್ವಂತ ನಿಧಿಯಿಂದ ಭರಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 27.12.2023ರ ಪತ್ರದಲ್ಲಿ, ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರು, ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 324/2020ರ "Para 96(4) The court hereby directs the Union and the States to ensure that the compensation for sewer deaths is increased (given that the previous amount fixed, i.e. Rs.10 lakhs) was made applicable from 1993. The current equivalent of that amount is Rs.30 lakhs. This shall be the amount to be paid, by the concerned agency, i.e., the Union, the Union Territory or the State as the case may be. In other words, compensation for sewer deaths shall be Rs.30 lakshs. In the event, dependents of any victim have not been paid such amount, the above amount shall be payable to them. Furthermore, this shall be the amount to be hereafter paid, as compensation.

(5) Likewise, in the case of sewer victims suffering disabilities, depending upon the severity of disabilities, compensation shall be disbursed. However, the minimum compensation shall not be less

T. Nag.

Scanned with OKEN Scanner

than Rs.10 lakhs. If the disability is permanent, and renders the victim econocmically helpless, the compensation shall not be less than Rs.20 lakhs" ಎಂದು ಆದೇಶ ಹೊರಡಿಸುವಂತೆ ಸಮಾಜ ಕಲ್ಯಾಣ ಇಲಾಖೆರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗೆ ಬಗ್ಗೆ ಆರ್ಥಿಕ ಇಲಾಖೆಯು 02.03.2024ರಲ್ಲಿ ಸರ್ವೋಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ: WP (Civil) No 324/2020, ದಿನಾಂಕ 20-10-2023 ರಂದು ನೀಡಿರುವ ಆದೇಶದಂತೆ ಮೃತಪಟ್ಟ ಮ್ಯಾನುಯಲ್ ಸ್ಕ್ಯಾವೆಂಜರ್ ಗಳ ಅವಲಂಬಿತರಿಗೆ ಒದಗಿಸುವ ಪರಿಹಾರ ಮೊತ್ತವನ್ನು ರೂ.30.00 ಲಕ್ಷಗಳಿಗೆ ಪರಿಷ್ಕರಿಸಿ ಆದೇಶ ಹೊರಡಿಸಲು ಮತ್ತು ಸದರಿ ಮೊತ್ತವನ್ನು ನಗರ ಸ್ಥಳೀಯ ಸಂಸ್ಥೆಯ ನಿಧಿಯಿಂದ ಪಾವತಿಸಲು ಸಹಮತಿಸಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4)ರ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಕಡತದಲ್ಲಿ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ: WP (Civil) No 324/2020, ದಿನಾಂಕ 20-10-2023 ರಂದು ನೀಡಿರುವ ಆದೇಶದಲ್ಲಿ ಮೃತಪಟ್ಟ ಮ್ಯಾನುಯಲ್ ಸ್ಕ್ಯಾವೆಂಜರ್ ಗಳ ಅವಲಂಬಿತರಿಗೆ ಒದಗಿಸುವ ಪರಿಹಾರ ಮೊತ್ತವನ್ನು ರೂ 30 ಲಕ್ಷಗಳಿಗೆ ಪರಿಷ್ಕರಿಸಿರುವ ಹಿನ್ನಲೇಯಲ್ಲಿ ಸದರಿ ಮೊತ್ತವನ್ನು ನಗರಸ್ಥಳೀಯ ಸಂಸ್ಥೆಯ ನಿಧಿಯಿಂದ ಪಾವತಿಸಲು ಆರ್ಥಿಕ ಇಲಾಖೆಯ ಅಭಿಪ್ರಾಯ ಪಡದು, ಪರಿಷ್ಕೃತ ಆದೇಶವನ್ನು ಹೊರಡಿಸುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ನಅಇ 239 ಜಿಇಎಲ್ 2023 (ಇ),** (ಭಾಗ-1)
**ಬೆಂಗಳೂರು, ದಿನಾಂಕ: 14.03.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 324/2024 ರ ತೀರ್ಪಿನಲ್ಲಿ ನೀಡಿರುವ ನಿರ್ದೇಶನಗಳನ್ವಯ ಸರ್ಕಾರದ ಆದೇಶ ಸಂಖ್ಯೆ: ನಅಇ 74 ಎಂಡಬ್ಲೂಪಿ 2015, ದಿನಾಂಕ: 23.11.2015 ರ ಆದೇಶವನ್ನು ಭಾಗಶಃ ಮಾರ್ಪಡಿಸಿ, ಕರ್ನಾಟಕ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರೆದಗುಂಡಿ ಮತ್ತು ಶೌಚಾಲಯ ಗುಂಡಿಗಳನ್ನು ಮ್ಯಾನುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯಲ್ಲಿ ಸ್ವಚ್ಛಗೊಳಿಸುವಾಗ ಮೃತಪಟ್ಟ ಮ್ಯಾನುಯಲ್ ಸ್ಕ್ಯಾವೆಂಜರ್‌ಗಳ ಅವಲಂಬಿತರಿಗೆ ಒದಗಿಸುವ ಪರಿಹಾರ ಮೊತ್ತವನ್ನು ರೂ.10.00 ಲಕ್ಷಗಳಿಂದ ರೂ.30.00 ಲಕ್ಷಗಳಿಗೆ ಪರಿಷ್ಕರಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 63 ವೆಚ್ಚ-9/2024, ದಿನಾಂಕ: 02.03.2024 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

T. Manj 14-3-2024

**(ಟಿ. ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

14/03

**ಇವರಿಗೆ:**

1. ಮಹಾಲೇಖಪಾಲರು (ಎ & ಇ ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನಿರ್ದೇಶಕರು, ಪೌರಾಡಳಿತ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ, (ಪೌರಾಡಳಿತ ನಿರ್ದೇಶಕರ ಮುಖಾಂತರ)
5. ರಾಜ್ಯದ ಎಲ್ಲಾ ಜಿಲ್ಲಾ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ (ಪೌರಾಡಳಿತ ನಿರ್ದೇಶಕರ ಮುಖಾಂತರ)
6. ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು/ಪೌರಾಯುಕ್ತರು/ ಮುಖ್ಯಾಧಿಕಾರಿಗಳು.

Scanned with OKEN Scanner

(ಪೌರಾಡಳಿತ ನಿರ್ದೇಶಕರ ಮುಖಾಂತರ).

7. ಸರ್ಕಾರದ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
9. ಶಾಖಾ ರಕ್ಷಾ ಕಡತ,
10. ಹೆಚ್ಚುವರಿ ಪ್ರತಿ.

Scanned with OKEN Scanner